773 ಶ್ರೀ ಬಂಡೆಪ್ಪ ಕಾಶ್ಯಂಪೂರ್ : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ದಕ್ಷಿಣ ಕ್ಷೇತ್ರದಲ್ಲಿ ನಡೆದ ಜನಸ್ಪಂದನ ಕಾರ್ಯಕ್ರಮ ದಡಿಯಲ್ಲಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು?

ಆ) ಬಂದ ಅರ್ಜಿಗಳಲ್ಲಿ ಎಷ್ಟು ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ? ಎಷ್ಟು ಅರ್ಜಿಗಳು ಬಾಕಿ ಉಳಿದಿವೆ, ಉಳಿಯಲು ಕಾರಣಗಳೇನು?

ಇ) ಜನಸ್ಪಂದನ ಕಾರ್ಯಕ್ರಮ ಪ್ರಾರಂಭವಾದ ಮೇಲೆ ಪರಿಣಾಮಕಾರಿಯಾಗಿ ಸಾರ್ವಜನಿಕರ ಕೆಲಸಗಳು ಆಗುತ್ತಿವೆಯೇ?

ಈ) ಇಲ್ಲದಿದ್ದಲ್ಲಿ ಕಾರಣಗಳೇನು?

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಯವರು) :

ಅ) 10780 ಅರ್ಜಿಗಳು.

ಆ) 10,548 ಅರ್ಜಿಗಳು ವಿಲೇವಾರಿಯಾಗಿರುತ್ತವೆ. 232 ಅರ್ಜಿಗಳು ಬಾಕಿ ಇರುತ್ತವೆ.

ಬಾಕಿ ಇರುವ ಅರ್ಜಿಗಳ ಪೈಕಿ ಆಶ್ರಯಯೋಜನೆಯಡಿ ಮನೆ ಮಂಜೂರಾತಿ, ಸರ್ಕಾರಿ ಜಮೀನು ಅಕ್ರಮ-ಸಕ್ರಮ ಬಗ್ಗೆ, ಹಕ್ಕು ಪತ್ರ ನಿವೇಶನ ಕೋರಿರುವುದು, ಜಮೀನು ಮಂಜೂರಾತಿ ಮತ್ತು ಕೆಲವು ಅರ್ಜಿಗಳು ಸಮರ್ಪಕವಿಲ್ಲದಿರುವುದು, ಇನ್ನು ಮುಂತಾದ ಕಾರಣಗಳಿಂದ ಅರ್ಜಿಗಳು ನಿಯಮಾನುಸಾರ ಪರಿಶೀಲನೆಯಾಗಬೇಕಾಗಿರುವುದರಿಂದ ಬಾಕಿ ಉಳಿದಿರುತ್ತದೆ. ವಿಲೇವಾರಿಗೆ ಬಾಕಿ ಇರುವ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ತ್ವರಿತಗತಿಯಲ್ಲಿ ವಿಲೇಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಹೌದು.

ಈ) ಉದ್ಭವಿಸುವುದಿಲ್ಲ.

ಉಡುಪಿ ಜಿಲ್ಲೆ ಕಾರ್ಕಳ ತಾಲ್ಲೂಕು ಕೂಡ್ಲು ಪ್ರದೇಶದ ಅಭಿವೃದ್ಧಿ ಬಗ್ಗೆ.

868 ಶ್ರೀ ಗೋಪಾಲ ಭಂಡಾರಿ.ಹೆಚ್ : ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉಡುಪಿ ಜಿಲ್ಲೆಯ ಕಾರ್ಕಳ ತಾಲ್ಲೂಕು ಕೂಡ್ಲು ಪ್ರದೇಶವನ್ನು ಪ್ರವಾಸೋದ್ಯಮ ಕ್ಷೇತ್ರವಾಗಿ ಅಭಿವೃದ್ಧಿಪಡಿಸಲು ಸರ್ಕಾರ ಚಿಂತನೆ ನಡೆಸಿದೆಯೇ;